ಜಿಲ್ಲೆಯ ಹೆಸರು	ತಾಲ್ಲೂಕುವಾರು ವಿವರ
ಗಂಗಾವತಿ	03
ಯಲಬುರ್ಗಿ	10
32 ಬೀದರ್ – 61	
ಬಸವಕಲ್ಯಾಣ	06
ಭಾಲ್ಕಿ	09
ಬೀದರ್	26
ಹುಮ್ನಾಬಾದ್	20

483(854) ಶ್ರೀ ದಿನೇಶ್ ಗುಂಡೂರಾವ್ (ಗಾಂಧೀನಗರ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ರಾಜ್ಯದಲ್ಲಿ 2006–07ನೇ ಸಾಲಿನಲ್ಲಿ ಎಷ್ಟು ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡಲಾಗಿದೆ, (ತಾಲ್ಲೂಕುವಾರು ವಿವರ ನೀಡುವುದು)

ಆ) ರಾಜ್ಯದಲ್ಲಿ 2006–07ನೇ ಸಾಲಿನಲ್ಲಿ ಎಷ್ಟು ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಮಂಜೂರು ಮಾಡಲಾಗಿದೆ, (ತಾಲ್ಲೂಕುವಾರು ವಿವರ ನೀಡುವುದು)

ಇ) ಗಾಂಧೀನಗರ ಕ್ಷೇತ್ರದ ಶೇಷಾದ್ರಿಪುರಂನಲ್ಲಿ ಸರ್ಕಾರಿ ಪ್ರೌಢಶಾಲೆಯಿದ್ದರೂ ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ಮಂಜೂರು ಮಾಡದಿರಲು ಕಾರಣವೇನು,

ಈ) 2007–08ನೇ ಸಾಲಿನ ಶೈಕ್ಷಣಿಕ ವರ್ಷದಿಂದ ಶೇಷಾದ್ರಿಪುರಂಗೆ ಹೊಸ ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ರಾಜ್ಯದಲ್ಲಿ 2006–07ನೇ ಸಾಲಿನಲ್ಲಿ 485 ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡಿದೆ (ತಾಲ್ಲೂಕುವಾರು ಪಟ್ಟಿಯನ್ನು ಲಗತ್ತಿಸಿದೆ)

ಆ) ರಾಜ್ಯದಲ್ಲಿ 2006–07ನೇ ಸಾಲಿನಲ್ಲಿ 199 ಪದವಿ ಪೂರ್ವ ಕಾಲೇಜುಗಳನ್ನು ಮಂಜೂರು ಮಾಡಲಾಗಿದೆ (ತಾಲ್ಲೂಕುವಾರು ಪಟ್ಟಿಯನ್ನು ಲಗತ್ತಿಸಲಾಗಿದೆ)

ಇ) ಮತ್ತು ಈ) ಆಯವ್ಯಯದಲ್ಲಿನ ಅವಕಾಶ ಹಾಗೂ ಶೈಕ್ಷಣಿಕ ಅಗತ್ಯತೆ, ಇವುಗಳನ್ನು ಗಮನದಲ್ಲಿಟ್ಟುಕೊಂಡು, ಹೊಸ ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಹಂತ ಹಂತವಾಗಿ ಮಂಜೂರು ಮಾಡಲಾಗುತ್ತಿದೆ

484(369) ಶ್ರೀ ಗೋಪಾಲ ಪೂಜಾರಿ ಕೆ (ಬೈಂದೂರು) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಉಡುಪಿ ಜಿಲ್ಲೆಯಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗಗಳಲ್ಲಿ ಮಂಜೂರಾದ ಕಿರಿಯ ಇಂಜಿನಿಯರ್ ಹುದ್ದೆಗಳ ಸಂಖ್ಯೆ ಎಷ್ಟು,

ಆ) ಈವರೆವಿಗೂ ಭರ್ತಿಗೊಳಿಸದೇ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು, ಉಪ ವಿಭಾಗವಾರು ವಿವರ ನೀಡುವುದು,

ಇ) ಈ ಹುದ್ದೆಗಳನ್ನು ಭರ್ತಿಗೊಳಿಸುವ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಸಿ ಎಂ ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು)

ಅ) ಒಟ್ಟು 28 ಹುದ್ದೆಗಳು

ಆ) ಒಟ್ಟು 16 ಹುದ್ದೆಗಳು (ಉಪ ವಿಭಾಗವಾರು ವಿವರ)